ಮಂಗಳವಾರ, 16.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 114
Digital Varthe Kannada Daily
Volume 01 - Issue 114
Tuesday 16.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಪ್ರೀತಿಸಿದವಳಿಗೆ ಕೈ ಕೊಟ್ಟು ಬೇರೆ ಮದುವೆ: ಕಲ್ಯಾಣ ಮಂಟಪದಲ್ಲಿ ಯುವತಿಯ ರಂಪಾಟ



**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಪ್ರೇಮ ಮೋಸದ ಆಘಾತಕಾರಿ ಘಟನೆ ನಡೆದಿದೆ. ಹತ್ತು ವರ್ಷಗಳಿಂದ ಪ್ರೀತಿಸುತ್ತಿದ್ದ ಯುವತಿಗೆ ಕೈಕೊಟ್ಟು ಬೇರೊಬ್ಬಳ ಜೊತೆ ಮದುವೆಯಾಗುತ್ತಿದ್ದ ಯುವಕನ ಮದುವೆ ಮಂಟಪಕ್ಕೆ ಪ್ರೇಯಸಿ ನುಗ್ಗಿ ಪ್ರತಿಭಟನೆ ನಡೆಸಿದ್ದಾಳೆ. ಆದರೆ ಮದುವೆ ನಡೆದು ಮುಗಿದ ಬಳಿಕ ಯುವಕನ ಕುಟುಂಬಸ್ಥರು ಸಂತ್ರಸ್ತೆ ಮೇಲೆ ಹಲ್ಲೆ ನಡೆಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಘಟನೆ ಡಿಸೆಂಬರ್ 13ರಂದು ಚಿಕ್ಕಮಗಳೂರು ನಗರದ ಕಲ್ಯಾಣ ಮಂಟಪದಲ್ಲಿ ನಡೆದಿದೆ.

ಚಿಕ್ಕಮಗಳೂರು ಮೂಲದ ಶರತ್ ಎಂಬ ಯುವಕ ಹಾಸನ ಜಿಲ್ಲೆಯ ಬೇಲೂರು ತಾಲೂಕದ ಯುವತಿಯನ್ನು ಕಳೆದ ಹತ್ತು ವರ್ಷಗಳಿಂದ ಪ್ರೀತಿಸುತ್ತಿದ್ದನು. ಇಬ್ಬರ ನಡುವೆ ಪ್ರೀತಿ ಬೆಳೆದಿದ್ದು, ಮದುವೆಯಾಗುವುದಾಗಿ ಭರವಸೆ ನೀಡಿ ಯುವತಿಯನ್ನು ನಂಬಿಸಿದ್ದನು. ಯುವತಿಯ ಕುಟುಂಬಕ್ಕೂ ಶರತ್ ಪರಿಚಯವಿದ್ದು, ಮದುವೆಗೆ ಒಪ್ಪಿಗೆ ಸಿಕ್ಕಿತ್ತು. ಕಳೆದ ನವರಾತ್ರಿ ಸಮಯದಲ್ಲಿ ಎರಡೂ ಕುಟುಂಬಗಳ ನಡುವೆ ಮದುವೆ ಮಾತುಕತೆ ನಡೆದಿತ್ತು ಎನ್ನಲಾಗಿದೆ. ಆದರೆ ಶರತ್ ತನ್ನ ಮೊದಲ ಮದುವೆಯನ್ನು ಮುಚ್ಚಿಟ್ಟಿದ್ದನು. ಮೂರು ವರ್ಷಗಳ ಹಿಂದೆ ಮದುವೆಯಾಗಿ ವಿಚ್ಛೇದನ ಪಡೆದಿದ್ದ ಆತ, ಈ ವಿಷಯವನ್ನು ಹಳೇ ಪ್ರೇಯಸಿಗೆ ಹೇಳದೇ ಮತ್ತೆ ಪ್ರೀತಿ ನಾಟಕ ಆಡಿದ್ದನು. ದುಬೈಗೆ ಹೋಗುವುದಾಗಿ ಸುಳ್ಳು ಹೇಳಿ ತಪ್ಪಿಸಿಕೊಂಡಿದ್ದ ಶರತ್, ಬಳಿಕ ಮತ್ತೊಬ್ಬ ಯುವತಿಯೊಂದಿಗೆ ಮದುವೆ ಫಿಕ್ಸ್ ಮಾಡಿಕೊಂಡಿದ್ದನು.

ಹಾಸನದಿಂದ ಚಿಕ್ಕಮಗಳೂರಿಗೆ ಧಾವಿಸಿ ಬಂದ ಸಂತ್ರಸ್ತೆ, ಶರತ್ ಮನೆಗೆ ಹೋಗಿ ಮೋಸದ ಬಗ್ಗೆ ಪ್ರಶ್ನಿಸಿದಳು. ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದಳು. ಪೊಲೀಸರು ಶರತ್‌ನನ್ನು ಕರೆಸಿ ಬುದ್ಧಿ ಹೇಳಿದರು. ಮದುವೆ ನಿಲ್ಲಿಸುವಂತೆಯೂ, ಪ್ರೀತಿಸಿ ಮದುವೆಯಾಗುವುದಾಗಿ ನಂಬಿಸಿದ ಯುವತಿಯನ್ನೇ ಮದುವೆಯಾಗುವಂತೆ ಸಲಹೆ ನೀಡಿದರು. ಠಾಣೆಯಲ್ಲಿ ಪೊಲೀಸರ ಮುಂದೆ ಒಪ್ಪಿಕೊಂಡ ಶರತ್, ಮರುದಿನವೇ ಬೇರೊಬ್ಬ ಯುವತಿಯೊಂದಿಗೆ ಕಲ್ಯಾಣ ಮಂಟಪದಲ್ಲಿ ಮದುವೆಗೆ ಸಿದ್ಧನಾಗಿದ್ದ

ವಿಷಯ ತಿಳಿದ ಯುವತಿ ಮದುವೆ ಮಂಟಪಕ್ಕೆ ಧಾವಿಸಿ ಬಂದು ಪ್ರತಿಭಟನೆ ನಡೆಸಿದಳು. "ನನ್ನನ್ನು ಮದುವೆಯಾಗು" ಎಂದು ಪಟ್ಟು ಹಿಡಿದು ಮದುವೆ ನಿಲ್ಲಿಸಲು ಯತ್ನಿಸಿದಳು. ಆದರೆ ಪೊಲೀಸರು ಬರುವಷ್ಟರಲ್ಲಿ ಶರತ್ ತಾಳಿ ಕಟ್ಟಿ ಮದುವೆ ಮುಗಿಸಿದ್ದನು. ಮದುವೆ ಮುಗಿದ ಬಳಿಕ ಮಂಟಪದ ಬಳಿ ಧರಣಿ ಕುಳಿತು ಪ್ರತಿಭಟಿಸುತ್ತಿದ್ದ ಯುವತಿ ಮೇಲೆ ಯುವಕನ ತಾಯಿ ಮತ್ತು ಕುಟುಂಬಸ್ಥರು ಹಲ್ಲೆ ನಡೆಸಿದ್ದಾರೆ ಎಂಬ ಆರೋಪವಿದೆ. "ಹಣ ಕೊಡ್ತೀವಿ, ಸ್ಥಳ ಬಿಟ್ಟು ಹೋಗು" ಎಂದು ಪೊಲೀಸರ ಮುಂದೆಯೇ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ.

## ಪಾರ್ಟಿ ವೇಳೆ ಪೊಲೀಸರ ಎಂಟ್ರಿ: ಹೋಟೆಲ್ ಬಾಲ್ಕನಿಯಿಂದ ಹಾರಿ ಯುವತಿ ಗಂಭೀರ



**ಬೆಂಗಳೂರು:** ವೀಕೆಂಡ್‌ನಲ್ಲಿ ಸ್ನೇಹಿತರೊಂದಿಗೆ ಹೋಟೆಲ್‌ನಲ್ಲಿ ಪಾರ್ಟಿ ಮಾಡುತ್ತಿದ್ದ ವೇಳೆ ಪೊಲೀಸರು ಧಿಡೀರ್ ಎಂಟ್ರಿ ಕೊಟ್ಟ ಪರಿಣಾಮ ಭಯಗೊಂಡ ಯುವತಿ ಹೋಟೆಲ್ ಬಾಲ್ಕನಿಯಿಂದ) ಕೆಳಗೆ ಹಾರಿ ಗಂಭೀರ ಗಾಯಗೊಂಡಿರುವ ಘಟನೆ ಹೆಚ್‌ಎಎಲ್‌ನ ಎಇಸಿಎಸ್ ಲೇಔಟ್ ನ ಹೋಟೇಲ್‌ನಲ್ಲಿ ನಡೆದಿದೆ. ಘಟನೆಯಲ್ಲಿ ಯುವತಿಯ ತಲೆ, ಮೈಕೈಗೆ ಗಂಭೀರ ಗಾಯಗಳಾಗಿವೆ. ಸದ್ಯ ಗಂಭೀರ ಗಾಯಗೊಂಡಿರುವ ಯುವತಿಯನ್ನು ಕುಂದಲಹಳ್ಳಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾಳೆ. ಶನಿವಾರ ರಾತ್ರಿ ಯುವತಿ ಸೇರಿದಂತೆ ಎಂಟು ಜನ ಸ್ನೇಹಿತರು ಸೇರಿ ಪಾರ್ಟಿ ಆಯೋಜಿಸಿದ್ದರು. ಪಾರ್ಟಿಗಾಗಿ ಮೂರು ರೂಂಗಳನ್ನು ಬುಕ್ ಮಾಡಿದ್ದರು. ಬಳಿಕ ಯುವಕರು ಹಾಗೂ ಯುವತಿಯರು ಹಾಡುಗಳನ್ನ ಹಾಕಿಕೊಂಡು ಡ್ಯಾನ್ಸ್ ಮಾಡುತ್ತಿದ್ದರು. ಯುವಕರ ಪಾರ್ಟಿ, ಡ್ಯಾನ್ಸ್ ಕಂಡು ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಕೆಲ ನಿಮಿಷಗಳ ಬಳಿಕ ಹೋಟೇಲ್‌ಗೆ ಹೊಯ್ಸಳ ಪೊಲೀಸರು ಆಗಮಿಸಿದ್ದರು. ಪೊಲೀಸರು ಬಂದ ವಿಚಾರ ತಿಳಿದು ಬಾಲ್ಕನಿಗೆ ತೆರಳಿದ ಯುವತಿ ಭಯದಿಂದ ಬಾಲ್ಕನಿಯಿಂದ ಹಾರಿದ್ದಾಳೆ. ಕಬ್ಬಿಣದ ಗ್ರಿಲ್ಸ್ ಮೇಲೆ ಬಿದ್ದು ಯುವತಿಗೆ ಗಂಭೀರ ಗಾಯಗಳಾಗಿವೆ. ಬಳಿಕ ಯುವತಿಯನ್ನ ಆಕೆಯ ಸ್ನೇಹಿತರು ಆಸ್ಪತ್ರೆಗೆ ಸೇರಿಸಿದ್ದಾರೆ ಪಾರ್ಟಿ ವಿಚಾರ ತಿಳಿದು ಹೊಯ್ಸಳ ಸಿಬ್ಬಂದಿ ಹೊಟೇಲ್‌ಗೆ ಎಂಟ್ರಿ ಕೊಟ್ಟ ವೇಳೆ ಪಾರ್ಟಿ ವೀಡಿಯೋ ತೋರಿಸಿ ದೂರು ಬಂದಿದೆ ಎಂದಿದ್ದರು. ನಂತರ ಯುವಕರ ಬಳಿ ಹಣ ಕೇಳಿದ್ದಾರೆ ಎಂದು ಯುವಕನೊಬ್ಬ ಆರೋಪಿಸಿದ್ದಾನೆ.

ಫೋನ್ ಪೇ ಮಾಡುತ್ತೇವೆ ಎಂದು ಯುವಕರು ಹೇಳಿದಾಗ ಫೋನ್ ಪೇ ಬೇಡ, ಕ್ಯಾಶ್ ಕೊಡಿ ಎಂದು ಪೊಲೀಸರು ಕೇಳಿದ್ದಾರೆ. ಸರಿ ಎಂದು ಎಟಿಎಂನಲ್ಲಿ ಹಣ ತರುತ್ತೇನೆ ಎಂದು ಯುವಕ ಹೋಟೆಲ್‌ನಿಂದ ಹೊರಗೆ ಬಂದ ವೇಳೆ ಯುವತಿ ಹೋಟೆಲ್ ಬಾಲ್ಕನಿಯಿಂದ ಹಾರಿದ್ದಾಳೆ. ಸದ್ಯ ಘಟನೆ ಬಗ್ಗೆ ಹೆಚ್‌ಎಎಲ್ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಸ್ಥಳಕ್ಕೆ ತೆರಳಿದ ಪೊಲೀಸರು ಪರಿಶೀಲನೆ ನಡೆಸಿ,

ಘಟನೆ ಬಗ್ಗೆ ತನಿಖೆ ಕೈಗೊಂಡಿದ್ದಾರೆ ಇನ್ನು ಘಟನೆಗೆ ಸಂಬಂಧಿಸಿದಂತೆ ಹೋಟೆಲ್ ಮಾಲೀಕರ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ. ಯುವತಿ ತಂದೆ ಕೊಟ್ಟ ದೂರಿನ ಮೇರೆಗೆ ಹೆಚ್‌ಎಎಲ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಹೋಟೆಲ್ ಲಾಡ್ಜ್‌ನ ಬಾಲ್ಕನಿಯಲ್ಲಿ ಸುರಕ್ಷತೆ ವಹಿಸದೆ ನಿರ್ಲಕ್ಷ್ಯ ಎಂದು ದೂರು ದಾಖಲಿಸಲಾಗಿದೆ. ಪೊಲೀಸರ ತಪ್ಪು ಮುಚ್ಚಿಡಲು ಹೋಟೆಲ್ ಮಾಲೀಕರ ಮೇಲೆ ಎಫ್‌ಐಆರ್ ಮಾಡಿರುವ ಕುರಿತು ಅನುಮಾನ ವ್ಯಕ್ತವಾಗಿದೆ.

## 4 ಕಳ್ಳತನ ಪ್ರಕರಣ ಭೇದಿಸಿದ ಪೊಲೀಸ್; 6 ಖದೀಮರ ಬಂಧನ



**ಕಲಬುರಗಿ:** ಜಿಲ್ಲೆಯ ಶಹಾಬಾದ್ ಮತ್ತು ಜೇವರ್ಗಿ ಪೊಲೀಸರು ಕಾರ್ಯಾಚರಣೆ ನಡೆಸಿ ನಾಲ್ಕು ಪ್ರತ್ಯೇಕ ಕಳ್ಳತನ ಪ್ರಕರಣದಲ್ಲಿ 6 ಆರೋಪಿಗಳನ್ನು ಬಂಧಿಸಿದ್ದಾರೆ. ಅಂತಾರಾಜ್ಯ ಕಳ್ಳ ಚಿರಾಗ್ ರಾಠೋಡ್, ಸುನೀಲ್, ಮೊಹಮ್ಮದ್ ಯೂನಸ್ ಮತ್ತು ಇನ್ನು ಮೂವರು ಬಂಧಿತರು. ಸದ್ಯ ಬಂಧಿತರಿಂದ ಕಳ್ಳತನವಾದ ಚಿನ್ನಾಭರಣ ಸೇರಿದಂತೆ ಎಲ್ಲಾ ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಶಹಾಬಾದ್ ಹಾಗೂ ಜೇವರ್ಗಿ ಠಾಣೆಯಲ್ಲಿ ಪ್ರಕರಣಗಳು ದಾಖಲಾಗಿವೆ.

ಅಂತಾರಾಜ್ಯ ಕಳ್ಳ ಅಂದರ್: ಚಿನ್ನದ ಸರ ವಶಕ್ಕೆ ಕಲಬುರಗಿ ಜಿಲ್ಲೆಯ ಹೊನಗುಂಟಾ ಗ್ರಾಮದ ಪ್ರಸಿದ್ಧ ಚಂದ್ರಲಾ ಪರಮೇಶ್ವರಿ ದೇವಸ್ಥಾನ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತಾರಾಜ್ಯ ಕಳ್ಳನನ್ನು ಶಹಾಬಾದ್ ಪೋಲಿಸರು ಬಂಧಿಸಿದ್ದಾರೆ. ಮಹಾರಾಷ್ಟ್ರ ಮೂಲಕ ಚಿರಾಗ್ ರಾಠೋಡ್ ಬಂಧಿತ ಆರೋಪಿ. ಬಂಧಿತನಿಂದ ಪೊಲೀಸರು ಚಿನ್ನದ ಸರವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಮತ್ತೊಂದು ಪ್ರಕರಣದಲ್ಲಿ ಶಹಾಬಾದ್ ನಲ್ಲಿ ದ್ವಿಚಕ್ರ ವಾಹನ ಕದ್ದಿದ್ದ ಮೂವರು ಆರೋಪಿಗಳನ್ನು ಅರೆಸ್ಟ್ ಮಾಡಲಾಗಿದೆ. ಬಂಧಿತ ಆರೋಪಿಗಳಿಂದ 3 ದ್ವಿಚಕ್ರ ವಾಹನ, 90 ಸಾವಿರ ರೂ. ನಗದು ಜಪ್ತಿ ಮಾಡಲಾಗಿದೆ.

ಬೀಗ ಮುರಿದು ಮನೆಗೆ ಕನ್ನ ಹಾಕಿದ್ದವರು ಅರೆಸ್ಟ್ ಜಿಲ್ಲೆಯ ಜೇವರ್ಗಿ ತಾಲೂಕಿನ ಎಸ್.ಎನ್. ಗುಡೂರು, ಇಜೇರಿ ಗ್ರಾಮದ ಮನೆಗಳ್ಳತನ ಆರೋಪಿಗಳನ್ನು ಪೊಲೀಸರು ಸೆರೆಹಿಡಿದಿದ್ದಾರೆ. ಗುಡೂರಿನಲ್ಲಿ ಮನೆ ಬೀಗ ಮುರಿದು ಕಳವು ಮಾಡಿದ್ದ ಸುನೀಲ್ ನನ್ನು ಬಂಧಿಸಲಾಗಿದ್ದು, 51 ಗ್ರಾಂ ಚಿನ್ನಾಭರಣ, 212 ಗ್ರಾಂ ಬೆಳ್ಳಿ ಆಭರಣ, 6 ಲಕ್ಷ ರೂ ಹಣ ವಶಕ್ಕೆ ಪಡೆಯಲಾಗಿದೆ. ಇನ್ನು ಅದೇ ಗ್ರಾಮದ ಸಂಬಂಧಿಕರ ಮನೆಗೆ ನುಗ್ಗಿ ಸುಲಿಗೆ ಮಾಡಿದ್ದ ಮೊಹಮ್ಮದ್ ಯೂನಸ್ ಎಂಬಾತನನ್ನು ಪೊಲೀಸರ ಅರೆಸ್ಟ್ ಮಾಡಿದ್ದಾರೆ. ಮುಖಕ್ಕೆ ಮಾಸ್ಕ್ ಧರಿಸಿ, ಚಾಕು ತೋರಿಸಿ ಸುಲಿಗೆ ಮಾಡಿದ್ದ. ಸದ್ಯ ಬಂಧಿತ ಮೊಹಮ್ಮದ್ ಯೂನಸ್‌ನಿಂದ 16 ಗ್ರಾಂ ಚಿನ್ನಾಭರಣ ಜಪ್ತಿ ಮಾಡಲಾಗಿದೆ.

## ಗ್ಯಾರಂಟಿ ಯೋಜನೆಗಳಿಂದ ಬಡ ಕುಟುಂಬದ ಆರ್ಥಿಕ ಪರಿಸ್ಥಿತಿ ಸುಧಾರಣೆ




**ದೇವನಗೊಂದಿಯಲ್ಲಿ ಕುಂದು ಕೊರತೆ ಸಭೆ :** ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಬಚ್ಚೇಗೌಡ ಹೇಳಿಕೆ ಹೊಸಕೋಟೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅನುಷ್ಠಾನ ಮಾಡಿರುವ ಪಂಚ ಗ್ಯಾರಂಟಿಗಳಿಂದ ಪ್ರತಿ ಕುಟುಂಬದ ಆರ್ಥಿಕ ಪರಿಸ್ಥಿತಿಯಲ್ಲಿ ಸುಧಾರಣೆ ಕಾಣಲು ಸಾಧ್ಯವಾಗಿದೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಚಿಕ್ಕಹುಲ್ಲೂರು ಬಚ್ಚೇಗೌಡ ತಿಳಿಸಿದರು.

ತಾಲೂಕಿನ ದೇವನಗೊಂದಿ ಗ್ರಾಮ ಪಂಚಾಯತ್ ಆವರಣದಲ್ಲಿ ನಡೆದ ಗ್ಯಾರಂಟಿ ಯೋಜನೆ ಪಲಾನುಭವಿಗಳ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದರು
ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ಪಕ್ಷ 5 ಗ್ಯಾರಂಟಿಗಳೊಂದಿಗೆ ಪ್ರತಿ ಮನೆಗೆ ಕಾರ್ಡ್ ತಲುಪಿಸಿ ಮತ ಕೇಳಿದ್ದರ ಪರಿಣಾಮವಾಗಿ ಚುನಾವಣೆಯಲ್ಲಿ ಉತ್ತಮ ಪಲಿತಾಂಶದೊಂದಿಗೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿತ್ತು. ಸರ್ಕಾರ ರಚನೆ ನಂತರದ ಒಂದೇ ತಿಂಗಳಿನಲ್ಲಿ ಚುನವಣಾ ಪೂರ್ವದಲ್ಲಿ ನೀಡಿದ ಭರವಸೆಯಂತೆ ಗ್ಯಾರಂಟಿ ಅನುಷ್ಠಾನ ಮಾಡಿ ಬಡ ಮಧ್ಯಮ ವರ್ಗದ ಕುಟುಂಬದ ಆರ್ಥಿಕ ಪ್ರಗತಿಗೆ ಮುಂದಾಯಿತು. ಸುಮಾರು ಎರಡೂವರೆ ವರ್ಷದಿಂದ ನೀಡುತ್ತಿರುವ ಗೃಹಲಕ್ಷ್ಮಿ, ಶಕ್ತಿ ಯೋಜನೆ, ಗೃಹಜ್ಯೋತಿ, ಅನ್ನಭಾಗ್ಯ, ಯುವನಿಧಿ ಯೋಜನೆಗಳು ಬಡ ಕುಟುಂಬದ ನೆಮ್ಮದಿ ಬದುಕಿಗೆ ಪೂರಕವಾಗಿದ್ದು ಅದರ ಸಾಧಕ-ಭಾಧಕಗಳ ಕುರಿತು ಅವಲೋಕಿಸಲು ಗ್ರಾಮ ಪಂಚಾಯತ್ ಮಟ್ಟದಲ್ಲಿ ಪಲಾನುಭವಿಗಳ ಸಭೆ ನಡೆಸಲಾಗುತ್ತಿದ್ದು ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಶಾಸಕ ಶರತ್ ಬಚ್ಚೇಗೌಡರ ನಿರ್ದೇಶನದಂತೆ ಸಭೆ ನಡೆಸಲಾಗುತ್ತಿದ್ದು ಶೇ.100ರಷ್ಟು ಯೋಜನೆಯ ಗುರಿ ತಲುಪುವುದು ಉದ್ದೇಶವಾಗಿದೆ ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕು ಸದಸ್ಯ ಭೋದನಹೊಸಹಳ್ಳಿ ಮಂಜುನಾಥ್ ಮಾತನಾಡಿ ಸಭೆಗಳಲ್ಲಿ ಗೃಹಲಕ್ಷ್ಮಿ ಹಣ ಬಂದಿಲ್ಲ, ಗೃಹಜ್ಯೋತಿ ಯೋಜನೆ ಬರ್ತಿಲ್ಲ., ಅನ್ನಭಾಗ್ಯದ ಅಕ್ಕಿ ಕೊಡ್ತಿಲ್ಲ ಎಂಬ ದೂರುಗಳು ಬರುತ್ತಿದ್ದು ತಾಂತ್ರಿಕ ಸಮಸ್ಯೆ ಇರುತ್ತದೆ. ಆದಾಯ ತೆರಿಗೆ ಕಟ್ಟಿದ್ರೆ ಅಕ್ಕಿ ಕೊಡೊಲ್ಲ, ಗೃಹ ಲಕ್ಷ್ಮಿ ಹಣ ಬರೋಲ್ಲ, ನಿಗದಿಗಿಂತ ಹೆಚ್ಚಿನ ವಿದ್ಯುತ್ ಬಳಕೆ ಮಾಡಿದ್ರೆ ಬಿಲ್ ಬರುತ್ತೆ, ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳ ಬಳಿಗೆ ತೆರಳಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ಎಂದರು.

ಸಭೆಯಲ್ಲಿ ಸರಿಯಾದ ಸಮಯಕ್ಕೆ ಬಸ್ ಬರೋಲ್ಲ, ಸಾಕಷ್ಟು ಸಮಯದಲ್ಲಿ ಗ್ರಾಮಕ್ಕೆ ಬರಬೇಕಾದ ಬಸ್ ದುನ್ನಸಂದ್ರ ಕ್ರಾಸ್ ಬಳಿ ತಿರುವು ಪಡೆದು ಬೆಂಗಳೂರಿಗೆ ತೆರಳುತ್ತೆ, ಇದರಿಂದ ಸಾಕಷ್ಟು ಸಮಸ್ಯೆ ಶಾಲೆ ಕಾಲೇಜು ಮಕ್ಕಳಿಗೆ ಆಗುತ್ತಿದೆ ಎಂದು ಅಧಿಕಾರಿಗಳ ಬಳಿ ಸಮಸ್ಯೆಯ ಬೆಳಕು ಚೆಲ್ಲಿದರು.
ಗ್ರಾಪಂ ಅಧ್ಯಕ್ಷೆ ರತ್ನ ಗೋವಿಂದರಾಜ್, ಪಿಡಿಓ ಹರೀಶ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾ ಸದಸ್ಯ ಹೇಮಣ್ಣ, ತಾಲೂಕು ಸಮಿತಿ ಸದಸ್ಯರಾದ ಅಮ್ಜದ್ ಬೇಗ್, ಸಯ್ಯದ್ ಮೆಹಬೂಬ್, ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಲತಾರೆಡ್ಡಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು

ಫೋ ಟೋ : ಹೊಸಕೋಟೆ ತಾಲೂಕಿನ ದೇವನಗೊಂದಿ ಗ್ರಾಪಂ ಆವರಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪಲಾನುಭವಿಗಳ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಚಿಕ್ಕಹುಲ್ಲೂರು ಬಚ್ಚೇಗೌಡ ಮಾತನಾಡಿದರು.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

## ಮೊಬೈಲ್ ಯುಗದಲ್ಲಿಯೂ ಪೌರಾಣಿಕ ಕಲೆಗೆ ಮನ್ನಣೆ ಸತ್ಯದ ಪ್ರತಿಪಾದನೆಯೇ ನಾಟಕಗಳ ಜೀವಾಳ..!



**ನೆಲಮಂಗಲ:** ಇಂದಿನ ಯುವಪೀಳಿಗೆ ಮೊಬೈಲ್, ಫೇಸ್‌ಬುಕ್ ಮತ್ತು ವಾಟ್ಸಾಪ್‌ಗಳಂತಹ ಸಾಮಾಜಿಕ ಜಾಲತಾಣಗಳಲ್ಲಿ ಮುಳುಗಿರುವ ಸಂದರ್ಭದಲ್ಲಿಯೂ, ನಮ್ಮ ನೆಲದ ಪೌರಾಣಿಕ ನಾಟಕಗಳು ಇನ್ನೂ ಪ್ರದರ್ಶನಗೊಳ್ಳುತ್ತಿರುವುದು ಮತ್ತು ಅವುಗಳಿಗೆ ಮನ್ನಣೆ ಸಿಗುತ್ತಿರುವುದು ನಿಜಕ್ಕೂ ಸಂತಸದ ವಿಷಯ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಶ್ರೀನಿವಾಸ್ ಅಭಿಪ್ರಾಯಪಟ್ಟರು. ಪಟ್ಟಣದ ಕೆಇಬಿ ಕಚೇರಿ ಮುಂಭಾಗದಲ್ಲಿ, ರಾಜೀವ್ ಗಾಂಧಿ ಯುವಕರ ಸಾಂಸ್ಕೃತಿಕ ಕಲಾ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಪೌರಾಣಿಕ ನಾಟಕೋತ್ಸವ ಮತ್ತು 'ಸಂಪೂರ್ಣ ರಾಮಾಯಣ' ನಾಟಕ ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪೌರಾಣಿಕ ನಾಟಕಗಳು ಕೇವಲ ಮನರಂಜನೆಯಲ್ಲ, ಅವು ಸತ್ಯವನ್ನು ಎತ್ತಿ ಹಿಡಿಯುವ ಮಾಧ್ಯಮಗಳು ಎಂದು ಅವರು ತಿಳಿಸಿದರು.

ಸಂಸ್ಕೃತಿಯೇ ದೇಶದ ಆಸ್ತಿ ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಆರ್. ರಮೇಶ್, "ಭಾರತದ ಸಂಸ್ಕೃತಿ ಮತ್ತು ಪರಂಪರೆ ವಿಶ್ವದ ಹಲವು ದೇಶಗಳಿಗೆ ಮಾದರಿಯಾಗಿದೆ. ಅದರಲ್ಲಿಯೂ ಕರ್ನಾಟಕದ ಕಲೆ ಮತ್ತು ಸಂಸ್ಕೃತಿಗೆ ತನ್ನದೇ ಆದ ವಿಶಿಷ್ಟ ಛಾಪಿದೆ. ನಾಡು-ನುಡಿ, ದೇಶಪ್ರೇಮ ಹಾಗೂ ಶಾಂತಿ-ಸೌಹಾರ್ದತೆಯನ್ನು ಸಾರುವಲ್ಲಿ ಪೌರಾಣಿಕ ನಾಟಕಗಳ ಪಾತ್ರ ಹಿರಿದು," ಎಂದು ಕಲಾವಿದರ ಸೇವೆಯನ್ನು ಶ್ಲಾಘಿಸಿದರು.

ಪತ್ರಕರ್ತ ಸತೀಶ್ ಮಾತನಾಡಿ, "ಪೌರಾಣಿಕ ನಾಟಕಗಳ ಮೂಲ ಉದ್ದೇಶವೇ ದುಷ್ಟಶಕ್ತಿಯ ದಮನ ಮತ್ತು ಶಿಷ್ಟಶಕ್ತಿಯ ರಕ್ಷಣೆ. ಎಷ್ಟೇ ಕಷ್ಟಗಳು ಬಂದರೂ ಸತ್ಯವನ್ನು ಬಿಡದೆ, ಜೀವನದ ಎಲ್ಲಾ ಸಂಕಷ್ಟಗಳನ್ನು ಎದುರಿಸಿ ಅಂತಿಮವಾಗಿ ಗೆದ್ದ ಪೌರಾಣಿಕ ರಾಜರ ಕಥೆಗಳು ನಮಗೆ ಆದರ್ಶ ಉದಾಹರಣೆಗೆ ಸತ್ಯ ಹರಿಶ್ಚಂದ್ರ ಅಥವಾ ವಿಕ್ರಮ ಸತ್ಯಕ್ಕೆ ಎಂದು ಸಾವಿಲ್ಲ, ಅದು ಶಾಶ್ವತ ಎಂಬುದನ್ನು ಈ ನಾಟಕಗಳು ನೆನಪಿಸಿಕೊಡುತ್ತವೆ," ಎಂದು ವಿಶ್ಲೇಷಿಸಿದರು. ಈ ನಾಟಕೋತ್ಸವವು ಕಲಾವಿದರ ಅಭಿನಯದ ಮೂಲಕ ಪಾತ್ರಗಳ ಆಳ-ಅಗಲವನ್ನು ತೆರೆದಿಡುವಲ್ಲಿ ಹಾಗೂ ಪ್ರೇಕ್ಷಕರಿಗೆ ವಿಭಿನ್ನ ಅನುಭವ ನೀಡುವಲ್ಲಿ ಯಶಸ್ವಿಯಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಎಂ.ಎಸ್. ಮೂರ್ತಿ, ಗ್ಯಾರಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷರಾದ ಎಚ್. ನಾಗರತ್ನ, ಸಂಘದ ಅಧ್ಯಕ್ಷರಾದ ಡಿ.ವಿ. ಭರತ್, ಕಾರ್ಯದರ್ಶಿ ಗೋವಿಂದರಾಜ್, ಹಿರಿಯ ಕಲಾವಿದ ರಂಗನಾಥ್, ಕಲಾವಿದ ನರಸಿಂಹಮೂರ್ತಿ ಹಾಗೂ ಪತ್ರಕರ್ತರಾದ ಅಭಿಷೇಕ್, ಶಾಂತರಾಜ್ ಮತ್ತು ಮೋಹನ್ ವಿಜಯಲಕ್ಷ್ಮಿ ಮುರುಳಿ ಮೋಹನ್ ಜಗದೀಶ್ ಮತ್ತಿತರರು ಉಪಸ್ಥಿತರಿದ್

## ಕೊಠಾರಿ - ಕೊಟ್ಟಾರಿ ಸಮುದಾಯ ಕುಟುಂಬ ಮಿಲನದ ಸಂಭ್ರಮದ ಸಮಾರಂಭ..




ಅಖಿಲ ಕರ್ನಾಟಕ ಕೊಠಾರಿ ವೆಲ್ ಫೇರ್ ಅಸೋಸಿಯೇಷನ್ (ರಿ ) ಬೆಂಗಳೂರು ಇವರಿಂದ. ಸಮುದಾಯದ ಶ್ರೇಯೋಭಿವೃದ್ಧಿಗಾಗಿ ಶ್ರೀ ಸೂಕ್ತ ಹೋಮ ಮತ್ತು ಸಾಮೂಹಿಕ ಶ್ರೀ ಸತ್ಯ ನಾರಾಯಣ ಪೂಜೆಯನ್ನು ಅಖಿಲ ಕರ್ನಾಟಕ ಕೊಠಾರಿ ವೆಲ್ ಫೇರ್ ಅಸೋಸಿಯೇಷನ್ ಇವರು ಸಮಸ್ತ ಸಮುದಾಯದ ಬಂಧುಗಳ ಶ್ರೇಯೋಭಿವೃದ್ಧಿಗಾಗಿ ಆಯೋಜಿಸಿ ಬೆಂಗಳೂರಿನ ಬಸವನಗುಡಿಯಲ್ಲಿರುವ ಪ್ರಖ್ಯಾತ ಪ್ರಾರ್ಥನಾ ಸ್ಥಳವಾಗಿರುವ ಪುತ್ತಿಗೆ ಮಠದಲ್ಲಿ ದಿನಾಂಕ 14.12.2025 ರ ಭಾನುವಾರದಂದು ಸಮಸ್ತ ಕುಲ ಬಾಂಧವರ ಸಮ್ಮುಖದಲ್ಲಿ ಸಮುದಾಯದ ಕಲ್ಯಾಣಗೋಸ್ಕರ ಸಂಕಲ್ಪಿಸಿ ನಂತರದಲ್ಲಿ ಸಭಾ ಕಾರ್ಯಕ್ರಮ, ಸಮುದಾಯದ ಬಂಧುಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ಸುಪ್ರಸಿದ್ಧ ಕಲಾವಿದರ ಯಕ್ಷಗಾನ ಮತ್ತು ಸಾಧಕರ ಸನ್ಮಾನವು ಅದ್ದೂರಿಯಾಗಿ ನೆರವೇರಿತು.

ಅಖಿಲ ಕರ್ನಾಟಕ ಕೊಠಾರಿ ವೆಲ್ ಫೇರ್ ಅಸೋಸಿಯೇಷನ್ (ರಿ)ಬೆಂಗಳೂರು ಇದರ ಅಧ್ಯಕ್ಷರಾದ ಶ್ರೀ ರಾಘವೇಂದ್ರ ಕೊಠಾರಿ ಯವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅಖಿಲ ಕರ್ನಾಟಕ ಕೊಠಾರಿ ವೆಲ್ ಫೇರ್ ಅಸೋಸಿಯೇಷನ್ (ರಿ) ಬೆಂಗಳೂರು ಇದರ www.akkwa.in ವೆಬ್ ಸೈಟ್ ನ್ನು ದಕ್ಷಿಣ ಕನ್ನಡ ಜಿಲ್ಲಾ ವಿಟ್ಲ ಕ್ಷೇತ್ರ ದ ಮಾಜಿ ಶಾಸಕರಾದ ಶ್ರೀ ಪದ್ಮನಾಭ ಕೊಟ್ಟಾರಿಯವರು ಉದ್ಘಾಟಿಸಿ ಕುಟುಂಬ ಮಿಲನ 2025 ಕಾರ್ಯಕ್ರಮಕ್ಕೆ ಶುಭ ಹಾರೈಸಿ ಸಮುದಾಯವನ್ನು ಉದ್ದೇಶಿಸಿ ಹಿತವಚನ ನುಡಿದರು ಕುಟುಂಬ ಮಿಲನ 2025 ರ ಕಾರ್ಯಕ್ರಮದ ಗೌರವ ಉಪಸ್ಥಿತಿಯಲ್ಲಿ ದಕ್ಷಿಣ ಕನ್ನಡ ಜಿಲ್ಲಾ ಕೊಟ್ಟಾರಿ ಸಮಾಜ ಸುಧಾರಕ ಸಂಘದ ಗೌರವಾಧ್ಯಕ್ಷರಾದ ಶ್ರೀ ಬಾಲಕೃಷ್ಣ ಕೊಟ್ಟಾರಿ, ಉಡುಪಿ ಜಿಲ್ಲಾ ಧಾರ್ಮಿಕ ದತ್ತಿ ಇಲಾಖೆಯ ಸದಸ್ಯರಾದ ಶ್ರೀ ನಾಗಪ್ಪ ಕೊಠಾರಿ,ಜನಪ್ರಿಯ ಗ್ರೂಪ್ ಆಫ್ ಹೋಟೆಲ್ ನ ಮಾಲೀಕರು ಮತ್ತು ಸಮಾಜ ಸೇವಕರದ ಶ್ರೀ ರಾಜೀವ ಕೊಠಾರಿ, ಅಂತಾರಾಷ್ಟ್ರೀಯ ಲಯನ್ಸ್ ಕ್ಲಬ್ ನ ಜಿಲ್ಲಾಧ್ಯಕ್ಷರಾದ ಶ್ರೀ ನಾಗೇಶ್ ಕೊಟ್ಟಾರಿ, ಶ್ರೀ ತಾರಾನಾಥ್ ಕೊಟ್ಟಾರಿ, ಶ್ರೀ ಧನಂಜಯ ಕೊಟ್ಟಾರಿ,ಶ್ರೀ ರಾಮ ಕೊಠಾರಿ ಶ್ರೀ ಸುರೇಂದ್ರ, ಕೊಠಾರಿ, ಶ್ರೀ ನಾರಾಯಣ ಕೊಠಾರಿ, ಶ್ರೀ ಪಬ್ಲಿಕ್ ಫೈಲ್ ಪತ್ರಿಕೆ ಸಂಪಾದಕರು, ಎಮ್. ಎನ್ ಕೊಟ್ಟಾರಿ,ಶ್ರೀ ಸುರೇಂದ್ರ, ಕೊಠಾರಿ ತ್ರಿವೇಣಿ, ಶ್ರೀ ಸಂಜೀವ ಕೊಠಾರಿ ಮತ್ತು ಶ್ರೀಮತಿ ಇಂದುಮತಿ ಉಮೇಶ್ ಕೊಟ್ಟಾರಿಯವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶ್ರೀ ಕಿಶನ್ ಕೊಠಾರಿ ಸ್ವಾಗತಿಸಿ ಕುಮಾರಿ ಭೂಮಿಕಾ ಕೊಟ್ಟಾರಿ ವಂದಿಸಿದರು. ಕಾರ್ಯದರ್ಶಿ ಶ್ರೀಮತಿ ಜಯಂತಿ ಹುದಾರ್ ರವರು ಕಾರ್ಯಕ್ರಮವನ್ನು ನಿರೂಪಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಮತ ಕಳ್ಳತನ ನಡೆದಿರುವುದು ಸತ್ಯ, ಇದರ ವಿರುದ್ಧ ಸೂಕ್ತ ಕ್ರಮ: ಡಿ.ಕೆ ಶಿವಕುಮಾರ್



**ಬೆಂಗಳೂರು:**"ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತ ಕಳ್ಳತನ ನಡೆದಿರುವುದು ಸತ್ಯ. ಹೀಗಾಗಿ ಬಿಜೆಪಿ ಮಾಜಿ ಶಾಸಕ ಗುತ್ತೇದಾರ್ ಅವರ ವಿರುದ್ಧ ಆರೋಪ ಪಟ್ಟಿ ಸಲ್ಲಿಕೆ ಮಾಡುವ ಮೂಲಕ ಮತ ಕಳ್ಳತನ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಶಿವಕುಮಾರ್ ಅವರು, ಆಳಂದ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಸುಭಾಷ್ ಗುತ್ತೇದಾರ್ ಅವರ ಮೇಲೆ ಚಾರ್ಜ್ ಶೀಟ್ ಸಲ್ಲಿಕೆಯಾಗಿರುವ ಬಗ್ಗೆ ಕೇಳಿದಾಗ, "ಈ ಪ್ರಕರಣದಲ್ಲಿ ಯಾವುದೇ ಮುಚ್ಚುಮರೆಯಿಲ್ಲ. ಅಕ್ರಮ ನಡೆದಿರುವುದು ಸತ್ಯ. ಗಂಭೀರವಾದ ತನಿಖೆ ನಡೆಸಿ ಚಾರ್ಜ್ ಶೀಟ್ ಹಾಕಿದ್ದಾರೆ. ಈ ವಿಚಾರದ ಬಗ್ಗೆ ನಮ್ಮ ಶಾಸಕರು ಮಂಗಳವಾರದಂದು ಸದನದಲ್ಲಿ ದನಿ ಎತ್ತಲಿದ್ದಾರೆ. ಇದು ಕೇವಲ ಕರ್ನಾಟಕದ ದನಿಯಲ್ಲ. ಇಡೀ ಭಾರತದ ದನಿ. ಜನರ ಕೃಪೆಯಿಂದ ನಾವು ಇಲ್ಲಿ ಅಧಿಕಾರಕ್ಕೆ ಬಂದಿದ್ದೇವೆ" ಎಂದರು.

ತನಿಖೆ ನಡೆಸಿ ಕ್ರಮ ತೆಗದುಕೊಂಡಿದ್ದಾರೆ. ಫೋನ್ ಅಲ್ಲಿ ದಾಖಲೆಗಳು ಡಿಲೀಟ್ ಆಗಿವೆ ಎಂದು ಇದೆ. ಇದರ ಬಗ್ಗೆ ವರದಿ ತರಿಸಿಕೊಂಡು ನೋಡಿ ಆನಂತರ ಮಾತನಾಡುತ್ತೇನೆ. ರಾಹುಲ್ ಗಾಂಧಿ ಅವರ ಸಲಹೆಯಂತೆ ಲೀಗಲ್ ಬ್ಯಾಂಕ್ ಅನ್ನು ಪ್ರತಿ ಕ್ಷೇತ್ರದಲ್ಲೂ ಪ್ರಾರಂಭ ಮಾಡಬೇಕು. ಈ ವಿಚಾರದ ಬಗ್ಗೆ ನಾವು ಹೋರಾಟ ಮಾಡುತ್ತೇವೆ" ಎಂದು ತಿಳಿಸಿದರು

**ಮತದಾರರ ಹಕ್ಕಿನ ರಕ್ಷಣೆಗೆ ಹೋರಾಟ ಆರಂಭ**

ದೆಹಲಿಯಲ್ಲಿ ನಡೆಯಲಿರುವ ಮತ ಕಳ್ಳತನ ವಿರುದ್ಧದ ಪ್ರತಿಭಟನೆ ಬಗ್ಗೆ ಕೇಳಿದಾಗ, "ಮತದಾರರ ಹಕ್ಕಿನ ರಕ್ಷಣೆಗಾಗಿ ಮತ ಕಳ್ಳತನ ವಿರುದ್ಧದ ಹೋರಾಟ ಆರಂಭಿಸಿದ್ದೇವೆ. ಮತ ಕಳ್ಳತನ ವಿರುದ್ಧದ ಹೋರಾಟ ನಮ್ಮ ರಾಜ್ಯದಿಂದಲೇ ಆರಂಭವಾಗಿದ್ದು, ಭಾನುವಾರ ದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಪ್ರತಿಭಟನೆ ನಡೆಯಲಿದೆ. ನಮ್ಮ ರಾಜ್ಯದಲ್ಲಿ ಚಿಲುಮೆ ಸಂಸ್ಥೆ ಮೂಲಕ ಈ ಹಿಂದೆ ಸಾವಿರಾರು ಬಿಎಲ್‌ಓಗಳನ್ನು ನೇಮಕ ಮಾಡಿ ಅಕ್ರಮ ಎಸಗಲಾಗಿತ್ತು" ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಂವಿಧಾನ ಬದ್ಧವಾಗಿ ನಡೆದುಕೊಂಡು ಬಂದಿದೆ. ಈಗಾಗಲೇ ನಮ್ಮ ರಾಜ್ಯದ ಎಲ್ಲಾ ಮೂಲೆಗಳಿಂದ ಸಾವಿರಾರು ಕಾರ್ಯಕರ್ತರು, ಮುಖಂಡರು ದೆಹಲಿಗೆ ರೈಲು ಹಾಗೂ ಇತರೆ ಸಾರಿಗೆ ವ್ಯವಸ್ಥೆ ಮೂಲಕ ತೆರಳಿದ್ದಾರೆ. ಈ ಪ್ರತಿಭಟನೆಯಲ್ಲಿ 100ಕ್ಕೂ ಹೆಚ್ಚು ಶಾಸಕರು ಹಾಗೂ ಪರಿಷತ್ ಸದಸ್ಯರು ಭಾಗವಹಿಸುತ್ತಿದ್ದಾರೆ" ಎಂದು ಹೇಳಿದರು.

"ನಾವು ಚುನಾವಣೆ ಸೋತಿರಬಹುದು ಆದರೆ ಜನರಲ್ಲಿ ಜಾಗೃತಿ ಮೂಡಿಸಬೇಕಿದೆ. ಹೀಗಾಗಿ ನಮ್ಮ ನಾಯಕರಾದ ರಾಹುಲ್ ಗಾಂಧಿ ಅವರು ಈ ಪ್ರತಿಭಟನೆ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ" ಎಂದರು.

**ನೋಟೀಸ್ ಗೆ ಉತ್ತರ ನೀಡುವೆ**

ದೆಹಲಿ ಪ್ರವಾಸದ ವೇಳೆ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, "ನಾನು ಶನಿವಾರ ದೆಹಲಿ ತಲುಪುವುದೇ ತಡವಾಗುತ್ತದೆ. ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ನೋಟೀಸ್ ಬಂದಿದ್ದು ಅದಕ್ಕೆ ನಾನು ಉತ್ತರ ನೀಡಬೇಕಿದೆ. ಎಲ್ಲಾ ದಾಖಲೆ ತೆಗೆದುಕೊಂಡು ಹೋಗಿ ಅವರಿಗೆ ಉತ್ತರ ನೀಡುತ್ತೇನೆ" ಎಂದರು.

ಡ್ರಗ್ ಪೆಡ್ಲರ್ ಮನೆಗಳ ಮೇಲೆ ಬುಲ್ಡೋಜರ್ ಹತ್ತಿಸಬೇಕು ಎಂಬ ಗೃಹ ಸಚಿವರ ಹೇಳಿಕೆ ಬಗ್ಗೆ ಕೇಳಿದಾಗ, "ಇದರ ಬಗ್ಗೆ ಆನಂತರ ಮಾತನಾಡುತ್ತೇನೆ" ಎಂದು ತಿಳಿಸಿದರು.

# ಹೊಸ ವರ್ಷ ಸಂಭ್ರಮಕ್ಕೆ ಹೈ ಅಲರ್ಟ್: ಬೆಂಗಳೂರು ಸೇರಿ ರಾಜ್ಯಾದ್ಯಂತ ಕಟ್ಟೆಚ್ಚರ



**ಬೆಂಗಳೂರು:** 2026ರ ಹೊಸ ವರ್ಷದ ಸಂಭ್ರಮಕ್ಕೆ ಕೇವಲ ಕೆಲವೇ ದಿನಗಳು ಬಾಕಿ ಇರುವಂತೆಯೇ, ದೇಶದಲ್ಲಿ ಭದ್ರತಾ ಸಂಸ್ಥೆಗಳು ಹೈ ಅಲರ್ಟ್ ಘೋಷಿಸಿವೆ. ಇತ್ತೀಚಿನ ದೆಹಲಿಯಲ್ಲಿ ನಡೆದ ಕಾರು ಸ್ಫೋಟದ ಘಟನೆಯ ಬೆನ್ನಲ್ಲೇ ಕೇಂದ್ರ ಗುಪ್ತಚರ ಇಲಾಖೆಯು ಎಲ್ಲ ರಾಜ್ಯಗಳಿಗೆ ಮುನ್ನೆಚ್ಚರಿಕೆಯ ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದಲ್ಲಿ, ವಿಶೇಷವಾಗಿ ರಾಜಧಾನಿ ಬೆಂಗಳೂರಿನಲ್ಲಿ ಪೊಲೀಸ್ ಇಲಾಖೆ ಕಟ್ಟೆಚ್ಚರ ವಹಿಸಿದ್ದು, ಎಲ್ಲೆಡೆ ತೀವ್ರ ನಿಗಾ ವ್ಯವಸ್ಥೆ ಜಾರಿಗೊಳಿಸಲಾಗಿದೆ.

ದೆಹಲಿಯ ರೆಡ್ ಫೋರ್ಟ್ ಬಳಿ ನವೆಂಬರ್‌ನಲ್ಲಿ ನಡೆದ ಕಾರು ಸ್ಫೋಟದಲ್ಲಿ ಹಲವಾರು ಜನರು ಮೃತಪಟ್ಟಿದ್ದರು. ಈ ಘಟನೆಯ ನಂತರ ಕೇಂದ್ರ ಸರ್ಕಾರವು ಎಲ್ಲ ರಾಜ್ಯಗಳಿಗೆ ಹೆಚ್ಚಿನ ಎಚ್ಚರಿಕೆ ವಹಿಸುವಂತೆ ಸೂಚಿಸಿದೆ. ಹೊಸ ವರ್ಷಾಚರಣೆಯ ಸಂದರ್ಭದಲ್ಲಿ ಜನದಟ್ಟಣೆಯು ಹೆಚ್ಚಾಗುವುದರಿಂದ, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಗಟ್ಟುವ ನಿಟ್ಟಿನಲ್ಲಿ ಕರ್ನಾಟಕ ಪೊಲೀಸರು ಸಂಪೂರ್ಣ ಸಿದ್ಧತೆ ನಡೆಸಿದ್ದಾರೆ. ರಾಜ್ಯದ ಇತರ ನಗರಗಳಾದ ಮೈಸೂರು, ಹುಬ್ಬಳ್ಳಿ-ಧಾರವಾಡ, ಮಂಗಳೂರು ಸೇರಿದಂತೆ ವಿವಿಧ ಕಡೆಗಳಲ್ಲೂ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಪಬ್‌ಗಳು, ಬಾರ್‌ಗಳು, ರೆಸ್ಟೋರೆಂಟ್‌ಗಳಲ್ಲಿ ಆಚರಣೆಗೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಲಾಗಿದೆ. ಸಾಕಷ್ಟು ಸಿಬ್ಬಂದಿ, ಸಿಸಿಟಿವಿ ಕ್ಯಾಮೆರಾಗಳು ಕಡ್ಡಾಯಗೊಳಿಸಲಾಗಿದೆ. ಜನದಟ್ಟಣೆ ನಿಯಂತ್ರಣಕ್ಕಾಗಿ ವಿಶೇಷ ತಂಡಗಳನ್ನು ನಿಯೋಜಿಸಲಾಗಿದೆ




ಹೊಸ ವರ್ಷದ ಸಂದರ್ಭದಲ್ಲಿ ಮಾದಕ ದ್ರವ್ಯಗಳ ಸಾಗಾಟ ಹೆಚ್ಚಾಗುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಪೊಲೀಸರು ವಿಶೇಷ ತಪಾಸಣಾ ತಂಡಗಳನ್ನು ರಚಿಸಿದ್ದಾರೆ. ಚೆಕ್‌ಪೋಸ್ಟ್‌ಗಳಲ್ಲಿ ಮದ್ಯಪಾನ ಪರೀಕ್ಷೆ, ಅನುಮಾನಾಸ್ಪದ ವಾಹನಗಳ ತಪಾಸಣೆ ನಡೆಸಲಾಗುತ್ತಿದೆ. ವಿದೇಶಿ ಪ್ರಜೆಗಳ ನಿಗಾ ಕೂಡಾ ಹೆಚ್ಚಿಸಲಾಗಿದೆ. ಬಾಂಬ್ ತಂಡಗಳು, ಆಂಟಿ-ಸಬೋಟೇಜ್ ತಂಡಗಳು ಸಿದ್ಧತೆ ನಡೆಸಿವೆ.

ಪೊಲೀಸ್ ಆಯುಕ್ತರು ಜನತೆಗೆ ಮನವಿ ಮಾಡಿಕೊಂಡಿದ್ದಾರೆ. "ಹೊಸ ವರ್ಷದ ಸಂತೋಷವನ್ನು ಸುರಕ್ಷಿತವಾಗಿ ಆಚರಿಸಿ. ಯಾವುದೇ ಅನುಮಾನಾಸ್ಪದ ವಸ್ತು ಅಥವಾ ವ್ಯಕ್ತಿಯನ್ನು ಕಂಡರೆ ತಕ್ಷಣ ಪೊಲೀಸರಿಗೆ ತಿಳಿಸಿ." ಫ್ಲೈಓವರ್‌ಗಳಲ್ಲಿ ವಾಹನ ಸಂಚಾರ ನಿರ್ಬಂಧ, ಪಾರ್ಕಿಂಗ್ ನಿಯಮಗಳು ಕಟ್ಟುನಿಟ್ಟಾಗಿ ಜಾರಿಯಲ್ಲಿರುತ್ತವೆ.

ಬೆಂಗಳೂರಿನಲ್ಲಿ ಎಂ.ಜಿ. ರೋಡ್, ಬ್ರಿಗೇಡ್ ರೋಡ್, ಚರ್ಚ್ ಸ್ಟ್ರೀಟ್, ಇಂದಿರಾನಗರ, ಕೋರಮಂಗಲ ಮುಂತಾದ ಪ್ರಮುಖ ಸೆಲೆಬ್ರೇಷನ್ ಸ್ಥಳಗಳಲ್ಲಿ ವಿಶೇಷ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ನಗರದ ಪ್ರಮುಖ ರಸ್ತೆಗಳಲ್ಲಿ ಡ್ರೋನ್‌ಗಳ ಮೂಲಕ ನಿಗಾ ಕೈಗೊಳ್ಳಲಾಗುತ್ತಿದೆ. ಪೊಲೀಸ್ ಸಿಬ್ಬಂದಿಗಳಿಗೆ ಡ್ರೋನ್ ಹಾರಾಟದ ತರಬೇತಿ ನೀಡಲಾಗುತ್ತಿದ್ದು, ಆಕಾಶದಿಂದಲೇ ಜನಸಮೂಹದ ಮೇಲೆ ಹದ್ದಿನ ಕಣ್ಣಿಡಲು ಸಿದ್ಧತೆ ನಡೆಸಲಾಗುತ್ತಿದೆ. ಇದರಿಂದ ಯಾವುದೇ ಅನುಮಾನಾಸ್ಪದ ಚಟುವಟಿಕೆಗಳನ್ನು ತಕ್ಷಣವೇ ಗುರುತಿಸಿ ಕ್ರಮ ಕೈಗೊಳ್ಳಬಹುದು.

# ಮೊಟ್ಟೆ ಗುಣಮಟ್ಟ ಪರಿಶೀಲನೆಗೆ ರಾಜ್ಯವ್ಯಾಪಿ ಕ್ರಮ: ದಿನೇಶ್ ಗುಂಡು ರಾವ್




**ಬೆಂಗಳೂರು:** :ಮಾರುಕಟ್ಟೆಯಲ್ಲಿ ಲಭ್ಯವಿರುವ ಕೆಲವು ಜನಪ್ರಿಯ ಬ್ರ್ಯಾಂಡ್‌ಗಳ ಮೊಟ್ಟೆಗಳಲ್ಲಿ 'AOZ-ನೈಟ್ರೋಫ್ಯುರಾನ್' ಎಂಬ ಅತ್ಯಂತ ಅಪಾಯಕಾರಿ ಮತ್ತು ಕ್ಯಾನ್ಸರ್ ಕಾರಕ ಅಂಶ ಪತ್ತೆಯಾಗಿದೆ ಎಂಬ ಚರ್ಚೆಗಳು ತೀವ್ರಗೊಂಡಿವೆ. ಈ ಸುದ್ದಿಯ ಬೆನ್ನಲ್ಲೇ ರಾಜ್ಯದ ಆರೋಗ್ಯ ಇಲಾಖೆ ಅಲರ್ಟ್ ಆಗಿದ್ದು, ಸತ್ಯಾಂಶವನ್ನು ಪತ್ತೆಹಚ್ಚಲು ಮಾದರಿಗಳನ್ನು ಸಂಗ್ರಹಿಸಿ ತಪಾಸಣೆಗೆ ಒಳಪಡಿಸಲು ಸೂಚನೆ ನೀಡಿದೆ.

ಈ ರಾಸಾಯನಿಕವು ಮನುಷ್ಯನ ರೋಗನಿರೋಧಕ ಶಕ್ತಿಯನ್ನು ಕ್ರಮೇಣ ಕುಂದಿಸುತ್ತದೆ ಎಂದು ತಿಳಿದುಬಂದಿದೆ. ದುರ್ಬಲಗೊಂಡ ರೋಗನಿರೋಧಕ ಶಕ್ತಿಯಿಂದಾಗಿ ವ್ಯಕ್ತಿಯು ಸಾಮಾನ್ಯ ಸೋಂಕುಗಳಿಂದ ಹಿಡಿದು ಗಂಭೀರ ಕಾಯಿಲೆಗಳವರೆಗೂ ಸುಲಭವಾಗಿ ತುತ್ತಾಗುವ ಸಾಧ್ಯತೆ ಇದೆ. ಹೀಗಾಗಿ ಪ್ರತಿದಿನ ಮೊಟ್ಟೆ ಸೇವಿಸುವ ಲಕ್ಷಾಂತರ ಜನರು ತೀವ್ರ ಆತಂಕಕ್ಕೊಳಗಾಗಿದ್ದಾರೆ. ಮೊಟ್ಟೆ ಉತ್ಪಾದನೆಯಲ್ಲಿ ಕೋಳಿಗಳಿಗೆ ನೀಡಲಾಗುವ ನಿರ್ದಿಷ್ಟ ಮಾದರಿಯ ಆಂಟಿಬಯೋಟಿಕ್ ಈ ಅಂಶದ ರಚನೆಗೆ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ.

ಈ ಆತಂಕಕಾರಿ ಮಾಹಿತಿ ಹರಡುತ್ತಿದ್ದಂತೆ ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಕ್ಷಣವೇ ಎಚ್ಚೆತ್ತುಕೊಂಡಿದ್ದಾರೆ. ಈ ಹಿಂದೆ ಕೂಡ ಈ ಬಗ್ಗೆ ವರದಿಗಳು ಬಂದಿದ್ದವು ಮತ್ತು ಸಚಿವರ ಸೂಚನೆಯ ಮೇರೆಗೆ ಮೊಟ್ಟೆಗಳ ಪರೀಕ್ಷೆ ನಡೆಸಲಾಗಿತ್ತು. ಆದರೆ, ಹಿಂದಿನ ವರದಿಯಲ್ಲಿ ಯಾವುದೇ ಅಪಾಯಕಾರಿ ಅಂಶ ಪತ್ತೆಯಾಗಿರಲಿಲ್ಲ ಎಂದು ತಿಳಿದುಬಂದಿದೆ. ಆದರೆ, ಇತ್ತೀಚೆಗೆ ವಿಷಕಾರಿ ಅಂಶ ಪತ್ತೆ ಕುರಿತ ಚರ್ಚೆ ಮತ್ತು ಆತಂಕ ಹೆಚ್ಚುತ್ತಿರುವುದರಿಂದ, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಸಚಿವರು, ಹೊಸದಾಗಿ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಆರೋಗ್ಯ ಸಚಿವ, ರಾಜ್ಯದಲ್ಲಿ ಮಾರಾಟವಾಗುತ್ತಿರುವ ಎಲ್ಲಾ ರೀತಿಯ ಮೊಟ್ಟೆಗಳ ಮಾದರಿಗಳನ್ನು ತಕ್ಷಣವೇ ಸಂಗ್ರಹಿಸಬೇಕು. ಅವುಗಳನ್ನು ವಿಶ್ವಾಸಾರ್ಹ ಪ್ರಯೋಗಾಲಯಗಳಿಗೆ ಕಳುಹಿಸಿ, ಅವುಗಳಲ್ಲಿ AOZ-ನೈಟ್ರೋಫ್ಯುರಾನ್ ಅಥವಾ ಯಾವುದೇ ಇತರ ವಿಷಕಾರಿ ಅಂಶಗಳ ಇರುವಿಕೆಯ ಬಗ್ಗೆ ಕೂಲಂಕುಷವಾಗಿ ಪರೀಕ್ಷೆ ನಡೆಸಿ, ತಕ್ಷಣ ವರದಿ ನೀಡುವಂತೆ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಸಚಿವರು ಈ ವಿಷಯದ ಗಂಭೀರತೆಯನ್ನು ಒತ್ತಿ ಹೇಳಿದ್ದು, ಇದು ರಾಜ್ಯದ ಜನರ ಆರೋಗ್ಯಕ್ಕೆ ಸಂಬಂಧಿಸಿದ ವಿಷಯವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯಾದ್ಯಂತ ಮೊಟ್ಟೆಗಳ ಮಾದರಿ ಸಂಗ್ರಹ ಕಾರ್ಯಾಚರಣೆ ನಡೆಯಲಿದೆ. ಒಂದು ವೇಳೆ ಈ ಪರೀಕ್ಷೆಯಲ್ಲಿ ಯಾವುದೇ ಜನಪ್ರಿಯ ಅಥವಾ ಸ್ಥಳೀಯ ಬ್ರ್ಯಾಂಡ್‌ಗಳ ಮೊಟ್ಟೆಗಳಲ್ಲಿ ಕ್ಯಾನ್ಸರ್ ಕಾರಕ ಅಂಶಗಳು ನಿಜವಾಗಿಯೂ ಪತ್ತೆಯಾದಲ್ಲಿ ಅಂತಹ ಮೊಟ್ಟೆ ಉತ್ಪಾದಕರ ವಿರುದ್ಧ ಸರ್ಕಾರವು ಕಠಿಣ ಕಾನೂನು ಕ್ರಮ ಕೈಗೊಳ್ಳಲಿದೆ. ಯಾರನ್ನೂ ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

## ದಿಲ್ಲಿಯಿಂದ ಹೊರಡದ ವಿಮಾನ: ರಾಜ್ಯದ ಶಾಸಕರು & ಸಚಿವರು ಫ್ಲೈಟ್‌ನಲ್ಲೇ ಲಾಕ್



**ನವದೆಹಲಿ**: ಉಂಟಾದ ದಟ್ಟವಾದ ಹೊಗೆ ಹಾಗೂ ತೀವ್ರ ಹವಾ ಮಾನ ವೈಪರೀತ್ಯದಿಂದಾಗಿ ಕರ್ನಾಟಕದ 21 ಶಾಸಕರು ಮತ್ತು 7 ಸಚಿವರು ಇಂಡಿಗೋ ವಿಮಾನದಲ್ಲೇ ಸಿಲುಕಿರುವ ಘಟನೆ ನಡೆದಿದೆ. ದೆಹಲಿಯಿಂದ ಬೆಳಗಾವಿಗೆ ಹೊರಡಬೇಕಿದ್ದ ವಿಮಾನವು ನಿಗದಿತ ಸಮಯಕ್ಕೆ ಟೇಕ್‌ಆಫ್ ಆಗದೇ ಗಂಟೆಗಳ ಕಾಲ ವಿಮಾನ ನಿಲ್ದಾಣದಲ್ಲೇ ನಿಂತಿರುವುದರಿಂದ ಶಾಸಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ದೆಹಲಿಯಲ್ಲಿ ಆಯೋಜಿಸಲಾಗಿದ್ದ ವೋಟ್ ಚೋರಿ ವಿರೋಧಿ ಸಮಾವೇಶದಲ್ಲಿ ಭಾಗವಹಿಸಲು ರಾಜ್ಯದ ಹಲವು ಸಚಿವರು ಹಾಗೂ ಕಾಂಗ್ರೆಸ್ ಶಾಸಕರು ದೆಹಲಿಗೆ ತೆರಳಿದ್ದರು. ಸಮಾವೇಶ ಮುಗಿದ ಬಳಿಕ, ದಾವಣಗೆರೆಯಲ್ಲಿ ಇಂದು ನಡೆಯಲಿರುವ ಹಿರಿಯ ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ದೆಹಲಿಯಿಂದ ಬೆಳಗಾವಿಗೆ ತೆರಳುವ ಉದ್ದೇಶದಿಂದ ಇಂಡಿಗೋ ವಿಮಾನವನ್ನು ಏರಿದ್ದರು. ಮಾಹಿತಿಯ ಪ್ರಕಾರ, ಈ ವಿಮಾನ ಬೆಳಗ್ಗೆ 5.30ಕ್ಕೆ ದೆಹಲಿಯಿಂದ ಟೇಕ್‌ಆಫ್ ಆಗಬೇಕಿತ್ತು. ಆದರೆ ವಿಮಾನದಲ್ಲಿ ಪ್ರಯಾಣಿಕರು ಕುಳಿತ ನಂತರವೇ ದೆಹಲಿಯಲ್ಲಿ ದಟ್ಟವಾದ ಹೊಗೆ ಆವರಿಸಿಕೊಂಡಿದ್ದು, ಇದರಿಂದ ವಿಮಾನ ಹಾರಾಟಕ್ಕೆ ಅನುಮತಿ ಲಭ್ಯವಾಗಿಲ್ಲ. ಪರಿಣಾಮವಾಗಿ, ಬೆಳಗ್ಗೆ 10 ಗಂಟೆಯಾದರೂ ವಿಮಾನ ಟೇಕ್‌ಆಫ್ ಆಗಿಲ್ಲ.

ಸುಮಾರು ನಾಲ್ಕು ಗಂಟೆಗಳಿಗಿಂತ ಹೆಚ್ಚು ಕಾಲ ಶಾಸಕರು ಮತ್ತು ಸಚಿವರು ವಿಮಾನದಲ್ಲೇ ಕುಳಿತು ಕಾಯುವಂತಾಯಿತು. ವಿಮಾನ ಸಿಬ್ಬಂದಿಯಿಂದ ಸ್ಪಷ್ಟ ಮಾಹಿತಿಯ ಕೊರತೆಯೂ ಅಸಮಾಧಾನಕ್ಕೆ ಕಾರಣವಾಗಿದೆ. "ವಿಮಾನ ಯಾವಾಗ ಟೇಕ್‌ಆಫ್ ಆಗುತ್ತದೆ ಎಂಬುದರ ಬಗ್ಗೆ ಸಿಬ್ಬಂದಿ ಯಾವುದೇ ಖಚಿತ ಮಾಹಿತಿ ನೀಡುತ್ತಿಲ್ಲ" ಎಂದು ಕೆಲ ಶಾಸಕರು ಬೇಸರ ವ್ಯಕ್ತಪಡಿಸಿದ್ದಾರೆ.



ವ್ಯತ್ಯಯ ಉಂಟಾಗಿದೆ. ಇದರಿಂದಾಗಿ ದೆಹಲಿಯಿಂದ ವಿವಿಧ ನಗರಗಳಿಗೆ ಹೊರಡುವ ಮತ್ತು ಆಗಮಿಸುವ ವಿಮಾನಗಳು ವಿಳಂಬವಾಗಿವೆ. ಈ ವಿಮಾನದಲ್ಲಿ ಕರ್ನಾಟಕದ ಹಲವು ಪ್ರಮುಖ ನಾಯಕರು ಪ್ರಯಾಣಿಸುತ್ತಿದ್ದಾರೆ. ಲಕ್ಷ್ಮೀ ಹೆಬ್ಬಾಳ್ಕರ್, ಶರಣ ಪ್ರಕಾಶ್ ಪಾಟೀಲ್, ಹೆಚ್.ಕೆ. ಪಾಟೀಲ್, ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ಎಂ.ಬಿ. ಪಾಟೀಲ್, ಕೆ.ಜೆ. ಜಾರ್ಜ್, ರೆಹಮಾನ್ ಖಾನ್ ಸೇರಿದಂತೆ 20ಕ್ಕೂ ಹೆಚ್ಚು ಶಾಸಕರು ಮತ್ತು ಸಚಿವರು ವಿಮಾನದಲ್ಲೇ ಸಿಲುಕಿದ್ದಾರೆ. ಅಂತ್ಯಕ್ರಿಯೆ ಮಹತ್ವದ ಕಾರ್ಯಕ್ರಮ ವಾಗಿರುವುದರಿಂದ, ಸಮಯಕ್ಕೆ ದಾವಣಗೆರೆಗೆ ತಲುಪಲಾಗುತ್ತದೆಯೇ ಎಂಬ ಆತಂಕ ನಾಯಕರಲ್ಲಿ ಮೂಡಿದೆ.

## ಪರಪ್ಪನ ಅಗ್ರಹಾರದಲ್ಲಿ ಎಲ್ಲರ ಬೆವರಿಳಿಸಿದ ನೂತನ ಡಿಜಿಪಿ ಅಲೋಕ್ ಕುಮಾರ್

**ಆನೇಕಲ್:** ಬಂದಿಖಾನೆ ಡಿಜಿಪಿಯಾಗಿ ನೇಮಕದ ಬಳಿಕ ಮೊದಲ ಬಾರಿ ಪರಪ್ಪನ ಅಗ್ರಹಾರ ಜೈಲಿಗೆ ಡಿಜಿಪಿ ಅಲೋಕ್ ಕುಮಾರ್ ಭೇಟಿ ನೀಡಿದ್ದಾರೆ. ಜೈಲಿನ ಚೆಕ್ ಪೋಸ್ಟ್ ಬಳಿ ಸಿಬ್ಬಂದಿಯಿಂದ ಮಾಹಿತಿ ಪಡೆದ ಡಿಜಿಪಿ, ಅಧಿಕಾರಿಗಳ ಜೊತೆ ಸೆಂಟ್ರಲ್ ಜೈಲಿನ ಸುತ್ತಮುತ್ತ ಓಡಾಡಿ ಪರಿಶೀಲನೆ ನಡೆಸಿದ್ದಾರೆ. ಪ್ರತಿ ಬ್ಯಾರಕ್‌ಗೂ ಭೇಟಿ ನೀಡಿ ಮಾಹಿತಿ ಕಲೆಹಾಕಿದ್ದಾರೆ.



**'ಎಲ್ಲ ಬಂದ್ ಆಗ್ಬೇಕು'**

ಜೈಲಿನ ಪ್ರತಿ ಬ್ಯಾರಕ್ ವಿಸಿಟ್ ಮಾಡಿರುವ ಅಲೋಕ್ ಕುಮಾರ್, ಕೈದಿಗಳ ಬಳಿಯು ಮಾಹಿತಿ ಕಲೆ ಹಾಕಿದ್ದಾರೆ. ಊಟ, ತಿಂಡಿ, ಶೌಚಾಲಯ ವ್ಯವಸ್ಥೆ ಬಗ್ಗೆ ಕೈದಿಗಳಿಗೆ ಡಿಜಿಪಿ ಪ್ರಶ್ನೆ ಕೇಳಿದ್ದು, ಮೊಬೈಲ್ ಬಳಕೆ ಮಾಡುತ್ತಿದ್ರೆ, ಸಿಬ್ಬಂದಿ ವಶಕ್ಕೆ ನೀಡುವಂತೆ ತಾಕೀತು ಕೂಡ ಮಾಡಿದ್ದಾರೆ. ಕಳ್ಳಾಟ ಆಡಿದ್ರೆ ಕಠಿಣ ಕ್ರಮ ಎದುರಿಸಲು ಸಜ್ಜಾಗಿ ಎಂದು ಎಚ್ಚರಿಕೆ ಕೂಡ ನೀಡಿದ್ದಾರೆ. ಗಾಂಜಾ, ಬಿಡಿ ಸಿಗರೇಟ್ ಇನ್ಮೇಲೆ ಸಿಗಲ್ಲ. ಎಲ್ಲಾ ಬಂದ್ ಆಗಬೇಕು ಎಂದು ಅಧಿಕಾರಿಗಳಿಗೂ ಸೂಚನೆ ನೀಡಿದ್ದಾರೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ಮಿಂಚಿನ ಸಂಚಾರ ನಡೆಸಿರುವ ಡಿಜಿಪಿ ಅಡುಗೆ ಮನೆ, ಆಸ್ಪತ್ರೆಗೂ ವಿಸಿಟ್ ಮಾಡಿದ್ದಾರೆ. ವೈದ್ಯರು ಚಿಕಿತ್ಸೆ ಮಾತ್ರ ಕೊಡಬೇಕು. ಅದನ್ನು ಬಿಟ್ಟು ಮೊಬೈಲ್, ಗಾಂಜಾ ಸಾಗಾಣೆ ಮಾಡಿದ್ರೆ ಕ್ರಮ ಕೈಗೊಳ್ಳಲಾಗುತ್ತೆ ಎಂದು ನೇರವಾಗಿ ಹೇಳಿದ್ದಾರೆ. ಅಡುಗೆ ಮನೆಯ ಸಿಬ್ಬಂದಿಗೂ ಎಚ್ಚರಿಸಿರುವ ಅವರು, ಎಡಿಷನಲ್ ಆ್ಯಕ್ಟಿವಿಟಿಗಳು ಬಂದ್ ಆಗಬೇಕು ಎಂದಿದ್ದಾರೆ. ಜೈಲಿನ ಬೇಕರಿಗೂ ಡಿಜಿಪಿ ಭೇಟಿ ನೀಡಿದ್ದು, ಯೀಸ್ಟ್‌ನಿಂದ ವೈನ್ ತಯಾರಿಸಿದ್ರೆ ವೈಲೆಂಟ್ ಆಗಬೇಕಾಗುತ್ತೆ ಎಂದು ಗರಂ ಆದ ಪ್ರಸಂಗ ಕೂಡ ನಡೆದಿದೆ.

**ಪೊಲೀಸ್ ಸಿಬ್ಬಂದಿಗೆ ತರಾಟೆ**

ಪಾರ್ಕಿಂಗ್ ಅವ್ಯವಸ್ಥೆ ಬಗ್ಗೆ ಪೊಲೀಸ್ ಸಿಬ್ಬಂದಿಯನ್ನ ಇದೇ ವೇಳೆ ಡಿಜಿಪಿ ಅಲೋಕ್ ಕುಮಾರ್ ತರಾಟೆಗೆ ತೆಗೆದುಕೊಂಡಿದ್ದಾರೆ. ಇಷ್ಟು ಜಾಗವಿದ್ರೂ ಯಾಕೆ ಸಮರ್ಪಕವಾಗಿ ಅದನ್ನು ಬಳಕೆ ಮಾಡಿಕೊಳ್ಳುತ್ತಿಲ್ಲ? ಜಾಗ ಸ್ವಚ್ಛ ಮಾಡಿ ವಾಹನಗಳ ಪಾರ್ಕಿಂಗ್‌ಗೆ ಸರಿಯಾಗಿ ಕ್ರಮ ಕೈಗೊಳ್ಳಿ ಎಂದು ಸೂಚಿಸಿದ್ದಾರೆ. ಸುಮಾರು 50ಕ್ಕೂ ಅಧಿಕ ಅಧಿಕಾರಿಗಳ ಜೊತೆ ಅವರು ಜೈಲ್ ರೌಂಡ್ಸ್ ನಡೆಸಿದ್ದು, ಐಜಿಪಿ ದಿವ್ಯಾ, ಡಿಸಿಪಿ ನಾರಾಯಣ, ಮುಖ್ಯ ಅಧೀಕ್ಷಕ ಅಂಶುಕುಮಾರ್, ಕಮಾಂಡರ್ ವೀರೇಶ್ ಕುಮಾರ್, ಸಹಾಯಕ ಕಮಾಂಡರ್ ಮಾದೇಶ ಸೇರಿದಂತೆ ಇತರ ಅಧಿಕಾರಿಗಳು ಈ ವೇಳೆ ಉಪಸ್ಥಿತರಿದ್ದರು.

## ಚುನಾವಣಾ ಆಯೋಗದ ನೆರವಿಲ್ಲದೆ ಬಿಜೆಪಿಗೆ ಗೆಲುವು ಅಸಾಧ್ಯ: ಪ್ರಿಯಾಂಕಾ ಗಾಂಧಿ ವಾಗ್ದಾಳಿ

**ನವದೆಹಲಿ:** ದೇಶದ ರಾಜಧಾನಿ ದೆಹಲಿಯ ಐತಿಹಾಸಿಕ ರಾಮಲೀಲಾ ಮೈದಾನದಲ್ಲಿ 'ವೋಟ್ ಚೋರ್, ಗದ್ದಿ ಚೋಡ್' (ಮತ ಕಳ್ಳತನ, ಅಧಿಕಾರ ತ್ಯಜಿಸಿ) ಎಂಬ ಘೋಷಣೆಯಡಿ ಕಾಂಗ್ರೆಸ್ ಆಯೋಜಿಸಿದ್ದ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ಅವರು ಭಾರತೀಯ ಜನತಾ ಪಕ್ಷ ಮತ್ತು ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. "ಚುನಾವಣಾ ಆಯೋಗದ ಸಹಾಯವಿಲ್ಲದೆ ಬಿಜೆಪಿಗೆ ಗೆಲುವು ಸಾಧ್ಯವಿಲ್ಲ," ಎಂದು ನೇರವಾಗಿ ಆರೋಪಿಸಿದರು


ಈ ಪ್ರತಿಭಟನಾ ಸಮಾವೇಶದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸೇರಿದಂತೆ ರಾಷ್ಟ್ರೀಯ ನಾಯಕರು ಭಾಗವಹಿಸಿದ್ದರು. ಕೇಂದ್ರ ಸರ್ಕಾರ ವಿರೋಧ ಪಕ್ಷಗಳ ಮೇಲೆ ನಡೆಸುತ್ತಿರುವ ದಬ್ಬಾಳಿಕೆಯ ಬಗ್ಗೆ ಮಾತನಾಡಿಸ ಪ್ರಿಯಾಂಕಾ ಗಾಂಧಿ , ಸಂವಿಧಾನವನ್ನು ರಕ್ಷಿಸಲು ನಾವು ಹೋರಾಡುತ್ತಿದ್ದೇವೆ. ನಮ್ಮ ಹೋರಾಟದ ಹಾದಿಯಲ್ಲಿ ಹಲವು ಮುಖ್ಯಮಂತ್ರಿಗಳನ್ನು ಜೈಲಿಗೆ ಹಾಕಲಾಯಿತು. ನಮ್ಮ ಪಕ್ಷದ ಪ್ರಮುಖ ಹಣಕಾಸು ಮೂಲವಾದ ಕಾಂಗ್ರೆಸ್‌ನ ಬ್ಯಾಂಕ್ ಖಾತೆಗಳನ್ನು ಸೀಜ್ ಮಾಡಲಾಯಿತು. ನಮ್ಮ ನಾಯಕರ ಮೇಲೆ ನಿರಂತರವಾಗಿ ಜಾರಿ ನಿರ್ದೇಶನಾಲಯ (ED) ಮತ್ತು ಆದಾಯ ತೆರಿಗೆ (IT) ಇಲಾಖೆ ದಾಳಿಗಳನ್ನು ನಡೆಸಲಾಯಿತು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆದರೆ, ಅದೇ ಸಮಯದಲ್ಲಿ ಭ್ರಷ್ಟಾಚಾರದ ಗಂಭೀರ ಆರೋಪ ಎದುರಿಸುತ್ತಿದ್ದ ನಾಯಕರನ್ನು ಬಿಜೆಪಿ ತಮ್ಮ ಪಕ್ಷಕ್ಕೆ ಸೇರಿಸಿಕೊಂಡಿತು. ಆ ನಾಯಕರನ್ನು 'ವಾಷಿಂಗ್ ಮಷಿನ್‌ನಲ್ಲಿ' ತೊಳೆದು ಶುದ್ಧರನ್ನಾಗಿ ಮಾಡಲಾಯಿತು," ಎಂದು ಲೇವಡಿ ಮಾಡಿದರು.

ದೇಶ ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳ ಬಗ್ಗೆ ಚರ್ಚಿಸಲು ಕೇಂದ್ರ ಸರ್ಕಾರ ಹಿಂದೇಟು ಹಾಕುತ್ತಿದೆ ಎಂದು ಆರೋಪಿಸಿದ ಅವರು, ದೇಶವು ಆರ್ಥಿಕ ಕುಸಿತ, ನಿರುದ್ಯೋಗ ಮತ್ತು ರೂಪಾಯಿ ಮೌಲ್ಯ ಕುಸಿತದಂತಹ ದೊಡ್ಡ ಸಮಸ್ಯೆಗಳನ್ನು ಎದುರಿಸುತ್ತಿದೆ. ಮತಗಳವು ಮತ್ತು ಚುನಾವಣಾ ಪರಿಷ್ಕರಣೆ ಕುರಿತು ಚರ್ಚಿಸಲು ನಾವು ಒತ್ತಾಯಿಸಿದರೆ, ಅವರು 'ವಂದೇ ಭಾರತ' (ರೈಲು) ಕುರಿತು ಚರ್ಚೆ ಆರಂಭಿಸುತ್ತಾರೆ. ಇವರಿಗೆ ನಿಜವಾದ ಚುನಾವಣೆಯನ್ನು ಎದುರಿಸುವ ಧೈರ್ಯವಿಲ್ಲ. ಒಂದು ವೇಳೆ ಸರಿಯಾದ ಮತ್ತು ನ್ಯಾಯಯುತ ಚುನಾವಣೆ ನಡೆದರೆ, ಬಿಜೆಪಿ ಕನಿಷ್ಠ ಒಂದು ಸ್ಥಾನವನ್ನೂ ಗೆಲ್ಲಲು ಸಾಧ್ಯವಿಲ್ಲ ಎಂದು ಭವಿಷ್ಯ ನುಡಿದರು. ಚುನಾವಣಾ ಪ್ರಕ್ರಿಯೆಯಲ್ಲಿನ ಅಕ್ರಮಗಳ ಬಗ್ಗೆ ಪ್ರಸ್ತಾಪಿಸಿದ ಪ್ರಿಯಾಂಕಾ ಗಾಂಧಿ, ಪ್ರಜಾಪ್ರಭುತ್ವದ ಮುಖ್ಯ ಕಾವಲುಗಾರನಾದ ಚುನಾವಣಾ ಆಯೋಗದ ನಿಷ್ಪಕ್ಷಪಾತದ ಬಗ್ಗೆ ತೀವ್ರ ಅನುಮಾನ ವ್ಯಕ್ತಪಡಿಸಿದರು. ಬಿಹಾರ, ಕರ್ನಾಟಕ ಮತ್ತು ಹರಿಯಾಣದಂತಹ ರಾಜ್ಯಗಳಲ್ಲಿ ಮತಗಳವು ಮತ್ತು ಅಕ್ರಮಗಳ ಮೂಲಕ ಬಿಜೆಪಿ ಗೆಲುವು ಸಾಧಿಸಿದೆ. ಇತ್ತೀಚೆಗೆ ಹತ್ತು ಸಾವಿರ ರೂಪಾಯಿಯನ್ನು ಮಹಿಳೆಯರ ಖಾತೆಗಳಿಗೆ ಚುನಾವಣೆಗೆ ಮುನ್ನ ವರ್ಗಾಯಿಸಲಾಯಿತು. ಇದನ್ನು ತಡೆಯುವವರು ಯಾರೂ ಇರಲಿಲ್ಲ ಎಂದು ಹೇಳಿದ್ದಾರೆ. ಅವರು ಸಂಸತ್ತಿನಲ್ಲಿ ಬಿಜೆಪಿ ನಾಯಕರ ಆಂತರಿಕ ಆತ್ಮವಿಶ್ವಾಸ ಕುಗ್ಗಿರುವುದನ್ನು ಗಮನಿಸಿದ್ದೇನೆ ಎಂದು ಹೇಳಿದ ಪ್ರೀಯಾಂಕ ಗಾಂಧಿ, ಅವರ ಕಣ್ಣಲ್ಲಿ ಕಣ್ಣಿಟ್ಟು ಮಾತನಾಡಿದರೆ ತಲೆ ತಗ್ಗಿಸಿಕೊಂಡು ಹೋಗುತ್ತಾರೆ.

ಏಕೆಂದರೆ ಅವರಿಗೆ ತಿಳಿದಿದೆ-ಚುನಾವಣಾ ಆಯೋಗದ ಸಹಾಯವಿಲ್ಲದೇ ಗೆಲುವು ಅವರಿಗೆ ಸಾಧ್ಯವಿಲ್ಲ. ಇದೇ ಸಂದರ್ಭದಲ್ಲಿ ಅವರು, ಚುನಾವಣಾ ಆಯೋಗದ ಮೂವರು ಅಧಿಕಾರಿಗಳ ಹೆಸರನ್ನು ನೆನಪಿಡಿ, ಏಕೆಂದರೆ ಅವರು ಪ್ರಜಾಪ್ರಭುತ್ವದ ಮೇಲೆ ಯುದ್ಧ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

# ಚುನಾವಣೆಯಲ್ಲಿ ಸೋತಿದ್ದಕ್ಕೆ ಮೀಸೆ ಬೋಳಿಸಿ ಮಾತು ಉಳಿಸಿಕೊಂಡ ಕೇರಳದ ನಾಯಕ



**ಕೇರಳ:** ರಾಜ್ಯದ ಸ್ಥಳೀಯ ಸಂಸ್ಥೆಗಳ ಚುನಾವಣೆಯು ಯಾವಾಗಲೂ ರಾಷ್ಟ್ರೀಯ ಮಟ್ಟದಲ್ಲಿ ಚರ್ಚೆಗೆ ಕಾರಣವಾಗುತ್ತದೆ. ಈ ಬಾರಿಯ ಚುನಾವಣೆಯು ವಿಶೇಷವಾಗಿ ಗಮನ ಸೆಳೆದಿದೆ.. ರಾಜಧಾನಿ ತಿರುವನಂತಪುರಂ ಮಹಾನಗರ ಪಾಲಿಕೆಯನ್ನು ಬಿಜೆಪಿ ಕೈವಶ ಮಾಡಿಕೊಂಡಿದ್ದು, ಕೇರಳದ ರಾಜಕೀಯ ಇತಿಹಾಸದಲ್ಲಿ ಒಂದು ಮೈಲಿಗಲ್ಲು. ಈ ಚುನಾವಣೆಯಲ್ಲಿ ಬಿಜೆಪಿ ಹಲವು ವಾರ್ಡ್‌ಗಳಲ್ಲಿ ಗೆಲುವು ಸಾಧಿಸಿದೆ.

ಕೇರಳದ ರಾಜಕೀಯವು ಸಾಮಾನ್ಯವಾಗಿ ಎರಡು ಪ್ರಮುಖ ಮೈತ್ರಿಕೂಟಗಳ ನಡುವೆ ಸೀಮಿತವಾಗಿದೆ. ಎಲ್‌ಡಿಎಫ್ (ಲೆಫ್ಟ್ ಡೆಮಾಕ್ರಟಿಕ್ ಫ್ರಂಟ್, ಕಮ್ಯುನಿಸ್ಟ್ ನೇತೃತ್ವದಲ್ಲಿ) ಮತ್ತು ಯೂಡಿಎಫ್ (ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್, ಕಾಂಗ್ರೆಸ್ ನೇತೃತ್ವದಲ್ಲಿ). ಈ ಎರಡು ಮೈತ್ರಿಕೂಟಗಳು ಕಳೆದ ಹಲವು ದಶಕಗಳಿಂದ ರಾಜ್ಯದ ಆಡಳಿತವನ್ನು ಹಂಚಿಕೊಂಡಿವೆ. ಆದರೆ ಈ ಬಾರಿಯ ಸ್ಥಳೀಯ ಚುನಾವಣೆಯಲ್ಲಿ ಎಲ್‌ಡಿಎಫ್ ಭಾರೀ ಹಿನ್ನಡೆ ಅನುಭವಿಸಿದ್ದು, ಯೂಡಿಎಫ್ ಭರ್ಜರಿ ಜಯ ಗಳಿಸಿದೆ. ಈ ಬದಲಾವಣೆಯು ಕೇರಳದಲ್ಲಿ ಬಿಜೆಪಿಯ ಹೆಚ್ಚುತ್ತಿರುವ ಪ್ರಭಾವವನ್ನು ಸೂಚಿಸುತ್ತದೆ.

ಈ ಚುನಾವಣಾ ಫಲಿತಾಂಶಗಳ ನಡುವೆ ಒಂದು ವಿಚಿತ್ರ ಮತ್ತು ಆಸಕ್ತಿದಾಯಕ ಘಟನೆ ನಡೆದಿದೆ. ಪಠಣಂತಿಟ್ಟ ಜಿಲ್ಲೆಯ ಎಲ್‌ಡಿಎಫ್‌ನ ಸ್ಥಳೀಯ ನಾಯಕ ಬಾಬು ವರ್ಗೀಸ್ ಅವರು ಚುನಾವಣೆಗೂ ಮುನ್ನ ಮಾಡಿದ ಶಪಥವು ಇದೀಗ ವೈರಲ್ ಆಗಿದೆ. ಅವರು ತಮ್ಮ ಪಕ್ಷ ಮತ್ತೆ ಗೆಲ್ಲುತ್ತದೆ ಎಂದು ಭರವಸೆ ನೀಡಿದ್ದರು. ಒಂದು ವೇಳೆ ಸೋತರೆ, ತಮ್ಮ ಮೀಸೆಯನ್ನು ಬೋಳಿಸಿಕೊಳ್ಳುತ್ತೇನೆ ಎಂದು ಬೆಟ್ ಹಾಕಿದ್ದರು. ಬಾಬು ವರ್ಗೀಸ್ ಅವರು ಪಠಣಂತಿಟ್ಟದಲ್ಲಿ ಎಲ್‌ಡಿಎಫ್‌ನ ಪ್ರಮುಖ ಮುಖಂಡರಾಗಿದ್ದು, ಅನೇಕ ವರ್ಷಗಳಿಂದ ಪಕ್ಷದ ಕಾರ್ಯಕರ್ತರೊಂದಿಗೆ ನಿಕಟ ಸಂಬಂಧ ಹೊಂದಿದ್ದರು.

ಚುನಾವಣಾ ಫಲಿತಾಂಶಗಳು ಬಂದ ನಂತರ, ಪಠಣಂತಿಟ್ಟದಲ್ಲಿ ಎಲ್‌ಡಿಎಫ್ ಹೀನಾಯ ಸೋಲು ಕಂಡಿದೆ. ಅನೇಕ ವಾರ್ಡ್‌ಗಳಲ್ಲಿ ಯೂಡಿಎಫ್ ಮತ್ತು ಬಿಜೆಪಿ ಗೆಲುವು ಸಾಧಿಸಿದ್ದರಿಂದ, ಎಲ್‌ಡಿಎಫ್‌ನ ಪ್ರಭಾವ ಕುಸಿದಿದೆ. ಈ ಸೋಲಿನ ಬಳಿಕ, ಬಾಬು ವರ್ಗೀಸ್ ಅವರ ಆಪ್ತರು, ಗೆಳೆಯರು ಮತ್ತು ಕಾರ್ಯಕರ್ತರು ಅವರ ಮೇಲೆ ಒತ್ತಡ ಹೇರಿದರು. "ನೀವು ಹೇಳಿದ ಮಾತನ್ನು ಪಾಲಿಸಿ" ಎಂದು ಒತ್ತಾಯಿಸಿದರು. ಅದರಂತೆ ಅವಳು ಮೀಸೆ ಬೋಳಿಸಿಕೊಂಡು ಮಾತು ಉಳಿಸಿಕೊಂಡಿದ್ದಾರೆ.

ಈ ವಿಡಿಯೋಗಳು ವಾಟ್ಸಾಪ್ ಗ್ರೂಪ್‌ಗಳು, ಫೇಸ್‌ಬುಕ್ ಮತ್ತು ಎಕ್ಸ್ (ಟ್ವಿಟರ್) ನಲ್ಲಿ ಈ ವಿಚಾರ ಹರಿದಾಡಿತ್ತು. ಅನೇಕರು ಇದನ್ನು ರಾಜಕೀಯ ಡ್ರಾಮಾ ಎಂದು ಕರೆದರು, ಇನ್ನು ಕೆಲವರು ನಾಯಕನ ಧೈರ್ಯವನ್ನು ಪ್ರಶಂಸಿಸಿದರು. ಅಂತಿಮವಾಗಿ, ಬಾಬು ವರ್ಗೀಸ್ ಅವರು ತಮ್ಮ ಮಾತಿನಂತೆ ಸಾರ್ವಜನಿಕವಾಗಿ ಮೀಸೆಯನ್ನು ಬೋಳಿಸಿಕೊಂಡರು.

ಈ ಘಟನೆಯ ವಿಡಿಯೋವನ್ನು ಕಾರ್ಯಕರ್ತರು ರೆಕಾರ್ಡ್ ಮಾಡಿ ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡರು. ಇದೀಗ ಈ ವಿಡಿಯೋ ವೈರಲ್ ಆಗಿದ್ದು, ಲಕ್ಷಾಂತರ ಮಂದಿ ನೋಡಿದ್ದಾರೆ. ನೆಟ್ಟಿಗರು ವಿವಿಧ ಪ್ರತಿಕ್ರಿಯೆಗಳನ್ನು ನೀಡಿದ್ದಾರೆ. ಕೆಲವರು "ಭಾರತದ ರಾಜಕೀಯ ಇತಿಹಾಸದಲ್ಲಿ ಮಾತು ಉಳಿಸಿಕೊಂಡ ಏಕೈಕ ನಾಯಕ" ಎಂದು ಹಾಸ್ಯವಾಗಿ ಕಾಲೆಳೆದಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.